ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 69
ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ)
ಉತ್ತರಿಸಬೇಕಾದ ದಿನಾಂಕ : 31.01.2012
ಉತ್ತರಿಸುವವರು : ಮುಖ್ಯಮಂತ್ರಿ

**ಪ್ರಶ್ನೆಗಳು:**

ಅ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು, ಶುಶ್ರೂಷಕಿಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕೊರತೆ ಇರುವ ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈ ಹುದ್ದೆಗಳ ಕೊರತೆಯಿಂದ ಗ್ರಾಮೀಣ ಪ್ರದೇಶದ ಜನರಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೇ;

ಈ) ರಾಜ್ಯದಲ್ಲಿ ಪ್ರಥಮಿಕ ಆರೋಗ್ಯ ಕೇಂದ್ರಗಳಿಗೆ ಔಷಧಿ ಹಾಗೂ ಇನ್ನಿತರ ಸಾಮಗ್ರಿಗಳನ್ನು ಸಮರ್ಪಕವಾಗಿ ಪೂರೈಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಸಮರ್ಪಕವಾಗಿ ಔಷಧಿ ಪೂರೈಸಲು ಸರ್ಕಾಕ್ಕಿರುವ ತೊಂದರೆಗಳೇನು?

**ಉತ್ತರಗಳು:**

ಅ) ಬಂದಿದೆ.

ಆ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ 332 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇವೆ ಹಾಗೂ 205 ಶುಶ್ರೂಷಕರ ಹುದ್ದೆ ಖಾಲಿ ಇವೆ.

ಆದುದರಿಂದ ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕನಿಷ್ಠ ಒಬ್ಬರು ವೈದ್ಯರಾದರೂ ಕರ್ತವ್ಯ ನಿರ್ವಹಿಸುವಂತೆ ಮಾಡುವ ನಿಟ್ಟಿನಲ್ಲಿ ಅವಶ್ಯವಿರುವೆಡೆ ಗುತ್ತಿಗೆ

ಆಧಾರದ ಮೇಲೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಿಸಿಕೊಳ್ಳಲು ಆಯಾ ಜಿಲ್ಲಾಧಿಕಾರಿಗಳಿಗೆ ಆದೇಶಿಸಲಾಗಿದೆ. ನೇಮಕಾತಿ ಪ್ರಕ್ರಿಯೆ ಕಾರ್ಯ ಪ್ರಗತಿಯಲ್ಲಿದೆ.

ಗ್ರಾಮೀಣ ಪ್ರದೇಶದಲ್ಲಿ ಶುಶ್ರೂಷೆ ಮಾಡುವ ಸಲುವಾಗಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ) ಅಡಿಯಲ್ಲಿ ಅವಶ್ಯವಿರುವ ಕಡೆ ಗುತ್ತಿಗೆ ಆಧಾರದ ಮೇಲೆ ಶುಶ್ರೂಷಕಿಯರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.

ಇ) ಗ್ರಾಮೀಣ ಪ್ರದೇಶದ ಜನರಿಗೆ ಚಿಕಿತ್ಸೆಗೆ ತೊಂದರೆಯಾಗದಂತೆ ಹತ್ತರದಲ್ಲಿರುವ ಆರೋಗ್ಯ ಕೇಂದ್ರದಿಂದ ವೈದ್ಯಾಧಿಕಾರಿಗಳನ್ನು ಪಡೆದು ಕರ್ತವ್ಯ ನಿರ್ವಹಿಸಲು ಸೂಚಿಸಲಾಗಿದೆ.

ಈ) ಸ್ಟೇಟ್ ಥೆರಾಪೆಟಿಕ್ ಸಮಿತಿಯ ಶಿಫಾರಸ್ಸು ಮಾಡಲ್ಪಟ್ಟ ಔಷಧಿ ಹಾಗೂ ರಾಸಾಯನಿಕಗಳ ಪಟ್ಟಿಯನ್ನು ರಾಜ್ಯದ ವಿವಿಧ ಹಂತದ ಆರೋಗ್ಯ ಸಂಸ್ಥೆಗಳಿಗೆ ನೀಡಿ ಅವರುಗಳಿಂದ ಬಂದ ಬೇಡಿಕೆ ಮೇರೆಗೆ Need Assessment Committee ಅನುಮೋದನೆ ಪಡೆದು ಒಟ್ಟಾರೆ ಬೇಡಿಕೆಯನ್ನು ಕ್ರೋಢೀಕರಿಸಲಾಗುತ್ತದೆ. ಈ ಬೇಡಿಕೆ ಪಟ್ಟಿಯಲ್ಲಿನ ಔಷಧಿಗಳನ್ನು ನಿಯಮಾನುಸಾರ ಖರೀದಿಸಿ ಪೂರೈಸಲಾಗುತ್ತಿದೆ.

ಉ) ವೈದ್ಯಾಧಿಕಾರಿಗಳು ಸಲ್ಲಿಸುವ ಬೇಡಿಕೆ ಪಟ್ಟಿಗೆ ಅನುಗುಣವಾಗಿ ಔಷಧಿಗಳನ್ನು ಆಯಾ ಆರೋಗ್ಯ ಸಂಸ್ಥೆಗಳಿಗೆ ಹೊಂದಿಕೊಂಡಿರುವ ಜಿಲ್ಲಾ ಔಷಧ ಉಗ್ರಾಣಗಳ ಮೂಲಕ ವಿತರಣೆ ಮಾಡಲಾಗುತ್ತಿದೆ.

ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿ ಸರಬರಾಜು ತೃಪ್ತಿಕರವಾಗಿದೆ. ಕೆಲವು ಔಷಧಿಗಳಿಗೆ ಟೆಂಡರ್ ಪ್ರಕ್ರಿಯೆ ವಿಳಂಬವಾದಲ್ಲಿ ಅಂತಹ ಔಷಧಿಗಳ ಕೊರತೆ ಉಂಟಾದಲ್ಲಿ ಅವುಗಳನ್ನು ಆರೋಗ್ಯ ರಕ್ಷಾ ಸಮಿತಿ ಒಪ್ಪಿಗೆ ಪಡೆದು ಯೂಸರ್ಸ್ ಫಮಡ್‌ನಲ್ಲಿ ಸ್ಥಳೀಯವಾಗಿ ಖರೀದಿಸಲು ಅವಕಾಶವಿರುತ್ತದೆ. ಇದಲ್ಲದೇ NRHM ನ ಮುಕ್ತನಿಧಿಯಿಂದಲೂ ಸಹ ತುರ್ತು

ಸಂದರ್ಭದಲ್ಲಿ ಔಷಧಿಗಳನ್ನು ಸ್ಥಳೀಯವಾಗಿ ಖರೀದಿಸಲಾಗುತ್ತಿದೆ. ಇವುಗಳಲ್ಲದೇ, ತುರ್ತು ಅವಶ್ಯಕತೆಗೆ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಹಾಗೂ ಜಿಲ್ಲಾ ಆಸ್ಪತ್ರೆಗಳಿಗೆ ಸ್ಥಳೀಯವಾಗಿ ಔಷಧಿಗಳನ್ನು ಖರೀದಿಸಲು ತಲಾ ರೂ. 4.00 ಲಕ್ಷಗಳ ಅನುದಾನವನ್ನು ನೀಡಲಾಗಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 71
ಸದಸ್ಯರ ಹೆಸರು : ಶ್ರೀ ಬಂಡೆಪ್ಪ ಖಾಶೇಂಪೂರ (ಬೀದರ್ ದಕ್ಷಿಣ)
ಉತ್ತರಿಸಬೇಕಾದ ದಿನಾಂಕ : 31.01.2012
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು

**ಪ್ರಶ್ನೆಗಳು:**

ಅ) ಬೀದರ್ ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ವಶದಲ್ಲಿರುವ ಸರ್ಕಾರಿ ಜಮೀನು ಎಷ್ಟು;

ಆ) ಕಂದಾಯ ಇಲಾಖೆಯ ವಶದಲ್ಲಿರುವ ಜಮೀನನ್ನು ಯಾವ ಯಾವ ಸಂಘ ಸಂಸ್ಥೆಗಳಿಗೆ ಎಷ್ಟೆಷ್ಟು ಎಕರೆ ಪ್ರದೇಶವನ್ನು ಮಂಜೂರು ಮಾಡಿ ಹಂಚಿಕೆ ಮಾಡಲಾಗಿದೆ.

ಇ) ಕಂದಾಯ ಜಮೀನನ್ನು ಸಂಘ ಸಂಸ್ಥೆಗಳಿಗೆ ಹಂಚಿಕೆ ಮಾಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

ಈ) ಕಂದಾಯ ಇಲಾಖೆ ವಶದಲ್ಲಿರುವ ಜಮೀನನ್ನು ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವ ಜಮೀನಿನ ವಿಸ್ತೀರ್ಣವೆಷ್ಟು;

ಉ) ಖಾಸಗಿರಯವರು ಯಾವ ಯಾವ ಸರ್ವೆ ನಂಬರುಗಳಲ್ಲಿ ಎಷ್ಟೆಷ್ಟು ಜಮೀನನ್ನು ಒತ್ತುವರಿ ಮಾಡಿಕೊಂಡಿದ್ದಾರೆ; (ಪೂರ್ಣ ಮಾಹಿತಿ ನೀಡುವುದು)

ಊ) ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿರುವ ಖಾಸಗಿ ವ್ಯಕ್ತಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;